**ಸಾಕ್ಷಿಗೆ ದಿನಾಂಕಃ 26.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.RMV ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು, ವಾಹನ ಅಮಾನತ್ತು ಪಂಚನಾಮೆಯನ್ನು ನಿ.ಪಿ.**4** ಎಂದು, ಮಾಲು ಪಟ್ಟಿಯನ್ನು ನಿ.ಪಿ.**5** ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**6** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**7** ಎಂದು, ಮತ್ತು ಐಎಂವಿ ವರದಿಯನ್ನು ನಿ.ಪಿ.**8** ಎಂದು

ಗುರುತಿಸಿದೆ.

4) **ಗಾಯದ ಪ್ರಮಾಣ ಪತ್ರ**ವನ್ನು ನಿ.ಪಿ.**9** ಎಂದು, **ವಾಹನದ ಫೋಟೋಗಳನ್ನು** ನಿ.ಪಿ.**10** ರಿಂದ ನಿ.ಪಿ.**12** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**13** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.13 ಎಂದು ಗುರುತು ಆಗಿರುವ ದಾಖಲೆಗಳು ಶಿಡ್ಲಘಟ್ಟ ಗ್ರಾಮಾಂತರ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**14** ಎಂದು, ಹೊರರೋಗಿ ವಿಭಾಗದ ದಾಖಲೆಯನ್ನು ನಿ.ಪಿ.**15** ಎಂದು ಗುರುತಿಸಿದೆ.

6) ಎರಡು **Medical Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**16** ಎಂದು, ಮತ್ತು ಒಟ್ಟು **18** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**17** ಎಂದು ಗುರುತಿಸಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.